ಶ್ರೀ ಧರ್ಮಸಿಂಗ್(ಮುಖ್ಯ ಮಂತ್ರಿಗಳು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

1086(1398) ಶ್ರೀ ವೆಂಕಟಮುನಿಯಪ್ಪ.ಬಿ.ಪಿ(ಬೇತಮಂಗಲ) : ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬಂಗಾರಪೇಟೆ ತಾಲ್ಲೂಕು ಬೇತಮಂಗಲ ದೊಡ್ಡ ಕೆರೆ ಹೂಳೆತ್ತುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಈ ಯೋಜನೆಯಡಿ ಹೂಳೆತ್ತುವ ಕಾಮಗಾರಿ ಯಾವಾಗ ಪ್ರಾರಂಭಿಸಲಾಗುವುದು;

ಇ) ಈ ಯೋಜನೆ ಕಾಯ್ದಿರಿಸಲಾಗಿದೆಯೇ?

ಈ) ಹಣ ಕಾಯ್ದಿರಿಸದಿದ್ದಲ್ಲಿ, ಯಾವಾಗ ಈ ಯೋಜನೆಗೆ ಹಣ ಬಿಡುಗಡೆ ಮಾಡಲಾಗುವುದು?

ಶ್ರೀ ಧರ್ಮಸಿಂಗ್(ಮುಖ್ಯ ಮಂತ್ರಿಗಳು) :

ಅ) ಇದೆ

ಆ) ಬೇತಮಂಗಲ ಕೆರೆಯ ಹೊಳೆತ್ತುವ ಕಾಮಗಾರಿಯ ರೂ 981.00 ಲಕ್ಷಗಳ (0.5ಮೀ) ಹಾಗೂ 1961.00 ಲಕ್ಷಗಳ ಅಂದಾಜನ್ನು (1ಮೀ. ಆಳಕ್ಕೆ) ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ಕೋರಿ ಸಲ್ಲಿಸಿದ್ದು ಪರಿಶೀಲನೆಯಲ್ಲಿದೆ.

ಇ) ಇಲ್ಲ

ಈ) ಯೋಜನೆ ಮಂಜೂರಾತಿ ಆದ ನಂತರ ಈ ಬಗ್ಗೆ ಪರಿಶೀಲಿಸಲಾಗುವುದು.

1087(1284) ಶ್ರೀಮತಿ. ವಿಜಯಲಕ್ಷ್ಮಮ್ಮ ಬಂಡಿಸಿದ್ದೇಗೌಡ (ಶ್ರೀರಂಗಪಟ್ಟಣ) : ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಲೋಕಪಾವನಿ ಏತ ನೀರಾವರಿ ಯೋಜನೆಗೆ ಸರ್ಕಾರ ಮಂಜೂರಾತಿ ನೀಡಿದೆಯೇ?

ಆ) ಈ ಹಿಂದೆ ಸರ್ಕಾರದ ಅವಧಿಯಲ್ಲಿ ಸದರಿ ಯೋಜನೆಗೆ ಸರ್ಕಾರದ ವತಿಯಿಂದ ಶಂಕುಸ್ಥಾಪನೆ ನೆರವೇರಿಸಲಾಗಿದೆಯೇ?

ಇ) ಈ ಯೋಜನೆ ಅನುಷ್ಟಾನಕ್ಕೆ ಇರುವ ತೊಂದರೆಗಳೇನು?

ಈ) ಯಾವಾಗ ಸದರಿ ಯೋಜನೆ ಕಾಮಗಾರಿಯನ್ನು ಆರಂಭಿಸಿ, ಪೂರ್ಣಗೊಳಿಸಾಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಲೋಕಪಾವನಿ ಏತ ನೀರಾವರಿ ಯೋಜನೆಗೆ ಮಂಜೂರಾತಿ ಪರಿಶೀಲನೆಯಲ್ಲಿದೆ.

ಆ) ಹೌದು

ಇ) ಲೋಕಪಾವನಿ ಏತ ನೀರಾವರಿ ಯೋಜನೆಯು ಸರ್ವೇ ಕಾಮ ಗಾರಿಗಳು ಪೂರ್ಣಗೊಂಡಿರುತ್ತದೆ. ಯೋಜನೆಯ ಅಂದಾಜು ಮೊತ್ತ ರೂ.47.00 ಕೋಟಿಗಳಾಗಿದ್ದು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲು ಸರ್ಕಾರದ ಮಟ್ಟದಲ್ಲಿ ಪರಿಶೀಲನೆಯಲ್ಲಿದೆ.

ಈ) ಮಂಜೂರಾತಿ ನೀಡಿದ ನಂತರ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.